ಇ) ಕೇರ್ ಕಾರ್ಯಕ್ರಮವು ಇಡೀ ರಾಜ್ಯದಲ್ಲಿ ವಿಸ್ತಾರಗೊಂಡಾಗ, ಈ ಸಲಹೆಯನ್ನು ಪರಿಶೀಲಿಸಬಹುದು.

ಚಿನ್ನಪ್ಪ ರೆಡ್ಡಿ ವರದಿಯನ್ನು ಜಾರಿಗೊಳಿಸುವುದು

403 (977): ಶ್ರೀ ಡಿ.ಆರ್. ಪಾಟೀಲ್ (ಗದಗ್):–

ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹಿಂದುಳಿದ ವರ್ಗಗಳ ಬಗ್ಗೆ ಚಿನ್ನಪ್ಪ ರೆಡ್ಡಿ ವರದಿಯನ್ನು ಜಾರಿಗೊಳಿಸಲು ಇರುವ ತೊಂದರೆ ಏನು ಹಾಗೂ ಇದನ್ನು ಯಾವಾಗ ಜಾರಿಗೊಳಿಸಲಾಗುವುದು ?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು):–

ಅ) ಚಿನ್ನಪ್ಪ ರೆಡ್ಡಿಯವರ ವರದಿಯು ರಾಜ್ಯ ಸಚಿವ–ಸಂಪುಟದ ಉಪ ಸಮಿತಿಯ ಪರಿಶೀಲನೆಯಲ್ಲಿದ್ದು ಉಪ ಸಮತಿಯ ಶಿಫಾರಸ್ಸುಗಳನ್ನು ಸಚಿವ ಸಂಪುಟ ಪರಿಶೀಲಿಸಿ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು.

ಮೈಸೂರು ನಗರದಲ್ಲಿ ಕೊಳಚೆ ನಿರ್ಮೂಲನ ಮಂಡಳಿ ಕಾರ್ಯಕ್ರಮ

418 (33): ಶ್ರೀ ಕೆ. ಹರ್ಷಕುಮಾರ್ ಗೌಡ (ಚಾಮರಾಜ):–

ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮೈಸೂರು ನಗರದಲ್ಲಿ ರಾಜ್ಯ ಕೊಳಚೆ ನಿರ್ಮೂಲನಾ ಮಂಡಳಿಯಿಂದ ಪ್ರಸಕ್ತ ವರ್ಷ ನಿರ್ಮಿಸಿದ ಮನೆಗಳೆಷ್ಟು;

ಆ) ಎಲ್ಲಾ ಫಲಾನುಭವಿಗಳಿಗೆ ಮನೆ ಕೊಡಲು ಸರ್ಕಾರವು ಕೈಗೊಂಡಿರುವ ಕ್ರಮವೇನು ?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):–

ಅ) 184 ಮನೆಗಳನ್ನು 1992–93ರ ಸಾಲಿನಲ್ಲಿ ಕಟ್ಟೋಣಿಕೆಗೆ ತೆಗೆದುಕೊಂಡಿದ್ದು, 40 ಮನೆಗಳು ಸಂಪೂರ್ಣವಾಗಿವೆ. ಉಳಿದವು ಪ್ರಗತಿಯಲ್ಲಿದೆ.

ಆ) ಮೈಸೂರು ನಗರದಲ್ಲಿರುವ ಕೊಳಚೆ ಪ್ರದೇಶಗಳಲ್ಲಿ ಜಾಗವು ಸರ್ಕಾರಕ್ಕೆ ಅಥವಾ ಮಂಡಳಿಗೆ ಸೇರಿದ ಜಾಗದಲ್ಲಿ ಮನೆಗಳನ್ನು ಕಟ್ಟುತ್ತಲಿದ್ದು ಉಳಿದ ಖಾಸಗೀ ಜಾಗದಲ್ಲಿರುವ ಕೊಳಚೆ ಪ್ರದೇಶಗಳಲ್ಲಿ ಭೂಸ್ವಾಧೀನಪಡಿಸಿಕೊಳ್ಳಲು ಮಂಡಳಿ ಮುಂದುವರೆದಿದ್ದು, ಹಾಗೂ ಲ್ಯಾಂಡ್ ಬ್ಯಾಂಕ್ ಯೋಜನೆಯಲ್ಲಿ ಅಭಿವೃದ್ಧಿ ಪ್ರಾಧಿಕಾರದಿಂದ ಜಾಗ ಪಡೆದು ಅಲ್ಲಿಯೂ ಕೂಡ ಮಂಡಳಿ ಮನೆ ಕಟ್ಟುತ್ತಾ ಬಂದಿದೆ.

ಶ್ರೀ ವಾಟಾಳ್ ನಾಗರಾಜ್:– ನಮ್ಮ ಪ್ರಶ್ನೆಗಳಿಗೆ ಉತ್ತರವೇ ಇಲ್ಲ. ಲಿಖಿತ ಪ್ರಶ್ನೆಗಳಿಗೆ ಉತ್ತರವೇ ಇಲ್ಲವೆಂದರೆ ಏನು ಮಾಡಬೇಕು ? ತಾವು ನಮ್ಮ ರಕ್ಷಣೆಗೆ ಬರಬೇಕು.

(ಗೊಂದಲ)

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ:– ನನ್ನ ಮೂರು ಪ್ರಶ್ನೆಗಳಿಗೆ ಒಂದಕ್ಕೂ ಉತ್ತರ ಇಲ್ಲ.